## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 449 |
| ಸದಸ್ಯರ ಹೆಸರು | : | ಶ್ರೀ ಆರ್.ಬಿ.ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 23.09.2020. |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿ,<br>ಲೋಕೋಪಯೋಗಿ ಮತ್ತು<br>ಸಮಾಜ ಕಲ್ಯಾಣ ಇಲಾಖೆ |

| ಕ್ರ ಸಂ: | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು-ಮೈಸೂರು ಕಾರಿಡಾರ್ ಯೋಜನೆಗೆ ಇಲ್ಲಿಯವರೆವಿಗೂ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; | ಬೆಂಗಳೂರು-ಮೈಸೂರು ಕಾರಿಡಾರ್ ಯೋಜನೆಯನ್ನು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೈಗೊಳ್ಳಲಾಗುತ್ತಿದ್ದು, ಪ್ರಶ್ನೆಗೆ ಭಾರತೀಯ ರಾಷ್ಟ್ರೀಯ ಹೆದ್ದಾರಿಗಳ ಪ್ರಾಧಿಕಾರವು ಈ ಕೆಳಕಂಡಂತೆ ವರದಿ ಮಾಡಿರುತ್ತದೆ..<br>ಈ ಯೋಜನೆಯನ್ನು ಅಂದಾಜು ಮೊತ್ತ ರೂ.8173.50 ಕೋಟಿಗಳ ಮೊತ್ತದಲ್ಲಿ 02 ಪ್ಯಾಕೇಜ್‌ಗಳಲ್ಲಿ ಅಂದರೆ ಪ್ಯಾಕೇಜ್-1: ಬೆಂಗಳೂರಿನಿಂದ ನಿಡಘಟ್ಟದವರೆಗೆ ರೂ.4390.00 ಕೋಟಿ ಹಾಗೂ ಪ್ಯಾಕೇಜ್-2: ನಿಡಘಟ್ಟದಿಂದ ಮೈಸೂರುವರೆಗೆ ರೂ.3783.50 ಕೋಟಿಗಳ ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗಿದೆ.<br>ಈ ಯೋಜನೆಗೆ ಇಲ್ಲಿಯವರೆಗೆ ರೂ.5319.11 ಕೋಟಿಗಳ ಅನುದಾನ ಬಿಡುಗಡೆ ಮಾಡಲಾಗಿದೆ. |
| ಆ) | ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯೊಳಗೆ ಮುಗಿಸಲು ಸರ್ಕಾರ ಕೈಗೊಂಡ ಕ್ರಮವೇನು; | ಬೆಂಗಳೂರು-ಮೈಸೂರು ಕಾರಿಡಾರ್ ಯೋಜನೆಯು ಪ್ರಗತಿಯಲ್ಲಿರುತ್ತದೆ. ಕೋವಿಡ್-19 ನಿಂದಾಗಿ ನೀಡಲಾಗಿರುವ ಕಾಲಾವಧಿ ವಿಸ್ತರಣೆ ಸೇರಿದಂತೆ ಪ್ಯಾಕೇಜ್-1(ಬೆಂಗಳೂರು-ನಿಡಗಟ್ಟ)-ಫೆಬ್ರವರಿ-2022 ಮತ್ತು ಪ್ಯಾಕೇಜ್-2(ನಿಡಗಟ್ಟ-ಮೈಸೂರು)-ಸೆಪ್ಟೆಂಬರ್-2022 ಕ್ಕೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.<br>ಸದರಿ ಕಾಮಗಾರಿಯನ್ನು ನಿಗಧಿತ ಅವಧಿಯೊಳಗೆ ಮುಗಿಸಲು ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದಿಂದ ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗಿರುತ್ತದೆ.<br>1. ಕಾಮಗಾರಿಗಳ ದೈನಂದಿನ ಪ್ರಗತಿಯು ಪ್ರಾಧಿಕಾರದ ಉಸ್ತುವಾರಿ ಯಲ್ಲಿರುತ್ತದೆ.<br>2. ಯೋಜನಾ ಪರಿಶೀಲನಾ ಸಭೆಯನ್ನು ಪ್ರಾದೇಶಿಕ ಅಧಿಕಾರಿಯು ಯೋಜನಾ ನಿರ್ದೇಶಕರು ಹಾಗೂ ವಿಶೇಷ ಭೂಸ್ವಾಧೀನಾಧಿಕಾರಿಗಳು, ಇವರು ಒಡಗೂಡಿ ನಡೆಸುತ್ತಿರುತ್ತಾರೆ.<br>3. ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪ್ರಾಧಿಕಾರದಿಂದ ಕೈಗೊಳ್ಳಲಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿಗಳಲ್ಲಿ ಬರುವ ಅಡಚಣೆಗಳ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ನೇತೃತ್ವದಲ್ಲಿ ಮಾಸಿಕವಾಗಿ ನಡೆಸುವ ವೀಡಿಯೋ ಸಂವಾದ ಸಭೆಯಲ್ಲಿ ಪ್ರಸ್ತಾಪಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>4. ನಿಯತಕಾಲಿಕವಾಗಿ ಕನ್ಸೆಷನರ್/ ಇಂಡಿಪೆಂಡೆಂಟ್ ಇಂಜಿನಿಯರ್‌ರವರೊಡನೆ ಯೋಜನೆ ಅಭಿವೃದ್ಧಿಯನ್ನು ವೇಗಗೊಳಿಸಲು ಹಾಗೂ ಬರುವ ಅಡೆತಡೆಗಳನ್ನು ಸಭೆಗಳ ಮುಖೇನ ಸರಿಪಡಿಸಿ ಕ್ರಮ ಕೈಗೊಳ್ಳಲಾಗುತ್ತಿದೆ |

| ಕ್ರ ಸಂ: | ಪ್ರಶ್ನೆ | ಉತ್ತರ |
|---|---|---|
| ಇ) | ಈ ಯೋಜನೆಯಿಂದ ಎಷ್ಟು ಮರಗಳನ್ನು ಕಡಿಯಲಾಗಿದೆ; ಈ ಮರಗಳ ಹರಾಜು ಪ್ರಕ್ರಿಯೆಯಲ್ಲಿ ಸರ್ಕಾರಕ್ಕೆ ಬಂದ ಆದಾಯವೆಷ್ಟು? (ವಿವರ ನೀಡುವುದು) | ಈ ಯೋಜನೆಗಾಗಿ 2946 ಮರಗಳನ್ನು ಕಡಿಯಲಾಗಿದೆ ಕಡಿಯಲಾದ ಮರಗಳ ಹರಾಜಿನಿಂದ ಸರ್ಕಾರಕ್ಕೆ ರೂ.5,27,46,182/- ಆದಾಯ ಬಂದಿರುತ್ತದೆ. |

ಕಡತ ಸಂಖ್ಯೆ: ಲೋಇ 175 ಸಿಎನ್‌ಹೆಚ್ 2020 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿ,
ಲೋಕೋಪಯೋಗಿ ಮತ್ತು
ಸಮಾಜ ಕಲ್ಯಾಣ ಇಲಾಖೆ